# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು, ನಂಜನಗೂಡು

## ಪೋಷಕರ ಸಭೆಯ ವರದಿ

ದಿನಾಂಕ 26.02.2021 ರಂದು ಕಾಲೇಜಿನ ಸಭಾಂಗಣದಲ್ಲಿ ಪದವಿ ವಿದ್ಯಾಥಿಗಳ ಪೋಷಕರ ಸಭೆಯನ್ನು ನಡೆಸಲಾಯಿತು. ಪೂರ್ವ ಯೋಜಿತ ಕಾರ್ಯಕ್ರಮದಂತೆ ಪೋಷಕ ಬಂಧುಗಳನ್ನು ಸಂಪ್ರದಾಯದಂತೆ ಸ್ವಾಗತಿಸುವ ಮುಖೇನ ಸಭಾ ಕಾರ್ಯಕ್ರಮವನ್ನು ಆರಂಭಿಸಲಾಯಿತು.

ಸಭೆಯಲ್ಲಿ ಕಾಲೇಜಿನ ಆಂಗ್ಲ ಭಾಷಾ ವಿಭಾಗದ ಮುಖ್ಯಸ್ಥರಾದ ಡಾ. ಸಿ ಎಸ್ ಹೊನ್ನೇಗೌಡ ಅವರು ಪ್ರಾಸ್ತಾವಿಕ ನುಡಿಗಳನ್ನಾಡುತ್ತಾ, ಪ್ರತಿಷ್ಠಿತ ಜೆಎಸ್‌ಎಸ್ ಮಹಾವಿದ್ಯಾಪೀಠದ ಆಶ್ರಯದಲ್ಲಿ ಮುನ್ನಡೆಯುತ್ತಿರುವ ನಮ್ಮ ಕಾಲೇಜು ಸಮಾಜದ ಎಲ್ಲಾ ವರ್ಗಗಳ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಾ, ಶಿಕ್ಷಣ ಸಂಸ್ಥೆಯ ಆಶಯಕ್ಕನುಗುಣವಾಗಿ ವಿದ್ಯಾರ್ಥಿಗಳ ಶೈಕ್ಷಣಿಕ, ಸಾಂಸ್ಕೃತಿಕ, ಸಾಹಿತ್ಯಿಕ, ಧಾರ್ಮಿಕ, ಸಾಮಾಜಿಕ ಹಾಗೂ ಆಧ್ಯಾತ್ಮಿಕ ಪ್ರಗತಿಗೆ ಪೂರಕವಾಗಿ ಅವರನ್ನು ಸತ್ಪ್ರಜೆಗಳನ್ನಾಗಿ ರೂಪಿಸುವ ನಿಟ್ಟಿನಲ್ಲಿ ಕಾಲೇಜಿನ ಪ್ರಾಂಶುಪಾಲರು, ಅಧ್ಯಾಪಕರು ಮತ್ತು ಅಧ್ಯಾಪಕೇತರ ಬಂಧುಗಳೊಂದಿಗೆ ಸಂಪರ್ಕವಿರಿಸಿಕೊಳ್ಳುವುದು ವಿದ್ಯಾರ್ಥಿ ಪೋಷಕರಿಗೆ ಸೂಕ್ತ ಎಂದರಲ್ಲದೇ, ಶೈಕ್ಷಣಿಕವಾಗಿ ನಮ್ಮ ಕಾಲೇಜು ಸಾಧನೆಯ ಹಾದಿಯಲ್ಲಿ ಮತ್ತಷ್ಟು ಪರಿಣಾಮಕಾರಿಯಾಗಿ ಸಾಗುವಲ್ಲಿ ಪೋಷಕರ ಪಾತ್ರ ಬಹುಮುಖ್ಯವಾಗಿರುತ್ತದೆಂದು ಅಭಿಪ್ರಾಯಪಟ್ಟರು.

ಪೋಷಕರ ಸಭೆಯಲ್ಲಿ ಭಾಗವಹಿಸಿದ್ದ ಶ್ರೀಯುತ ಶಿವಕುಮಾರ್, ಶ್ರೀ ಶಿವಕುಮಾರ್ ಹೆಚ್ ಆರ್, ಶ್ರೀ ಕೃಷ್ಣರಾಯ, ಶ್ರೀ ತಮ್ಮಯ್ಯಪ್ಪ ಮತ್ತು ಶ್ರೀಮತಿ ಜಯಶೀಲಾ ಮುಂತಾದವರು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸುತ್ತಾ, ಶ್ರೀಮಠದ ಧ್ಯೇಯೋದ್ದೇಶಗಳಿಗನುಣವಾಗಿ ಶಿಸ್ತು, ಸಮಯ ಪರಿಪಾಲನೆ, ಅನುಸರಣೆ, ಸಂಪ್ರದಾಯ, ಸಂಸ್ಕಾರ ಮತ್ತು ಪರಂಪರೆಯ ಪರಿಕಲ್ಪನೆಗಳನ್ನು ಪಾಲಿಸಿಕೊಂಡು ಸಾಗುತ್ತಿರುವ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳಲ್ಲಿ ನಮ್ಮ ಮಕ್ಕಳನ್ನು ವಿದ್ಯಾಭ್ಯಾಸಕ್ಕಾಗಿ ಸೇರಿಸಿರುವುದು ಹೆಮ್ಮೆಯ ಸಂಗತಿಯೆಂದು ಅಭಿಪ್ರಾಯಪಟ್ಟರಲ್ಲದೇ, ಆರ್ಥಿಕವಾಗಿ ಹಿಂದುಳಿದಿರುವ ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಆರ್ಥಿಕವಾಗಿ ಸಹಾಯ ಮಾಡುತ್ತಾ, ಮಾನಸಿಕ ಮತ್ತು ಬೌದ್ಧಿಕವಾಗಿ ವಿದ್ಯಾರ್ಥಿಗಳನ್ನು ಪ್ರೇರೇಪಿಸುತ್ತಿರುವ ಹಾಗೂ ಸಕಾಲದಲ್ಲಿ ಪ್ರವೇಶಾತಿ, ಪರೀಕ್ಷೆ ಮತ್ತು ಫಲಿತಾಂಶ ಸಂಬಂಧಿತ ಸೇವಾ ಕಾರ್ಯಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡಿರುವ ಅಧ್ಯಾಪಕ ಮತ್ತು ಅಧ್ಯಾಪಕೇತರ ಬಂಧುಗಳ ಸೇವೆಯನ್ನು ಶ್ಲಾಘಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಹೆಚ್ ಎಸ್ ನಾಗೇಂದ್ರ ಕುಮಾರ್ ಅವರು ಅಧ್ಯಕ್ಷೀಯ ನುಡಿಗಳನ್ನಾಡುತ್ತಾ, **ಪೋಷಕರ ಸಭೆಯ** ಆಯೋಜನೆಯ ಉದ್ದೇಶ – ಪೋಷಕರು ತಮ್ಮ ಮಕ್ಕಳ ಶೈಕ್ಷಣಿಕ ಪ್ರಗತಿಯನ್ನು ಅರಿಯುವಲ್ಲಿ ಕಾಲಕಾಲಕ್ಕೆ ಕಾಲೇಜಿಗೆ ಭೇಟಿ ನೀಡಿ, ಮಾಹಿತಿ ಪಡೆದು ಅವರ ಶೈಕ್ಷಣಿಕ ಶ್ರೇಯೋಭಿವೃದ್ಧಿಗೆ ಪ್ರಯತ್ನಶೀಲರಾಗಿರಬೇಕೆಂದು ಹೇಳಿದರಲ್ಲದೇ "ಕಾಯಕವೇ ಕೈಲಾಸ" ಎಂಬ ಪರಿಕಲ್ಪನೆಯಂತೆ ಶಿಕ್ಷಣ ಸರ್ವರಿಗೂ ಸಲ್ಲಬೇಕು ಎಂದರಿತು ನಮ್ಮ ಕಾಲೇಜಿನ ಅಧ್ಯಾಪಕರ ಸಂಘ ಆರ್ಥಿಕವಾಗಿ ಹಿಂದುಳಿದಿರುವ ಬಡ ವಿದ್ಯಾರ್ಥಿಗಳ ವಿದ್ಯಾರ್ಜನೆಗೆ ಅನುಕೂಲವಾಗಲೆಂದು ಯಾವುದೇ ರೀತಿಯ ಪ್ರತಿಫಲಾಪೇಕ್ಷೆ ಇಲ್ಲದೆ ಆರ್ಥಿಕವಾಗಿ ಸಹಾಯ ಮಾಡುತ್ತಾ ಬಂದಿರುವುದನ್ನು ಮುಕ್ತ ಮನಸ್ಸಿನಿಂದ ಶ್ಲಾಘಿಸಿದರು ಹಾಗೂ ಕಾಲೇಜಿನಲ್ಲಿ ಲಭ್ಯವಿರುವ ಎನ್‌ಎಸ್‌ಎಸ್, ಎನ್‌ಸಿಸಿ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಮುಂತಾದ ಸಾಮಾಜಿಕ ಚಟುವಟಿಕೆಗಳ ಘಟಕಗಳಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕೆಂಬುದನ್ನು ಪೋಷಕರ ಗಮನಕ್ಕೆ ತರುವುದರೊಂದಿಗೆ ಕಾಲೇಜಿನಲ್ಲಿ ನಡೆಸಲು ಉದ್ದೇಶಿಸಿರುವ ವಿವಿಧ ರೀತಿಯ ಸ್ಪರ್ಧಾತ್ಮಕ ಪರೀಕ್ಷೆಗಳ ತರಗತಿಗಳಿಗೆ ತಮ್ಮ ಮಕ್ಕಳನ್ನು ಕಳುಹಿಸಿ, ಇದರ ಪ್ರಯೋಜನ ಪಡೆದು ಅವರನ್ನು ದೇಶದ ಸತ್ಪ್ರಜೆಗಳನ್ನಾಗಿ ಮಾಡುವ ನಿಟ್ಟಿನಲ್ಲಿ ಅಧ್ಯಾಪಕರಂತೆ ಪೋಷಕರ ಪಾತ್ರವೂ ಮುಖ್ಯವಾಗಿರುತ್ತದೆಂದು ಅಭಿಪ್ರಾಯಪಟ್ಟರು.

ತೃತೀಯ ಬಿ.ಕಾಂ., ವಿದ್ಯಾರ್ಥಿಗಳಾದ ಕು. ಮಾಣಿಕ್ಯ ಮತ್ತು ತಂಡದವರು ಪ್ರಾರ್ಥಿಸಿದರು. ಪೋಷಕರ ಸಭೆಯ ಸಮಿತಿ ಸಂಚಾಲಕರಾದ ಶ್ರೀ ಹೆಚ್ ಜಿ ಗುರುಪ್ರಸಾದ್ ಎಲ್ಲರನ್ನು ಸ್ವಾಗತಿಸಿದರು. ಶ್ರೀಮತಿ ಎಂ ಎಸ್ ದೀಪಾಲಿ ವಂದಿಸಿದರು. ಡಾ. ಮೋಹನ್ ಸಿಂಗ್ ರವರು ಕಾರ್ಯಕ್ರಮ ನಿರೂಪಿಸಿದರು.

Unagend K

ಪ್ರಾಂಶುಪಾಲರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
ನಂಜನಗೂಡು-571 1